**ಓ.ಎಸ್. ಸಂಖ್ಯೆಃ 219 /2022**

**ಪಿ.ಡಬ್ಲ್ಯೂಃ 1**

ದಿನಾಂಕಃ30.05.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ವಾದಿಯ ಪರ ಶ್ರೀ.ವಿ.ಬಿ.ಪಿ. ವಕೀಲರಿಂದ**

ಇಂದು ನಾನು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣೀಕರಿಸುತ್ತೇನೆ.

2. ದಿಃ29-01-2024 ರಂದು ಈ ದಾವೆಯ ವಾದಿ ನನ್ನ ಹೆಸರಿಗೆ ಬರೆದುಕೊಟ್ಟ ಜಿಪಿಎ ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ1 ಎಂದು, ದಿಃ 02-08-1971 ರಂದು ಬರೆಯಲಾದ ದಾನ ಪತ್ರದ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ2 ಎಂದು, ದಿಃ 27-03-1979 ರಂದು ಬರೆಯಲಾದ ವಿಕ್ರಯ ಪತ್ರದ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ3 ಎಂದು, ದಾವಾ ಆಸ್ತಿಯ ಸರ್ವೆ ನಕ್ಷೆ ಯ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ4 ಎಂದು, ಕೈ ಬರವಣಿಯಲ್ಲಿರುವ 7 ಪಹಣಿ ಪತ್ರಿಕೆಗಳ ದೃಡೀಕೃತ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿಃ5 ರಿಂದ 11 ಎಂದು, 21 ಗಣಕಿಕೃತ ಪಹಣಿ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿಃ12 ರಿಂದ 32 ಎಂದು, ದಿಃ 12-09-2022 ರಂದು ತಹಶೀಲ್ದಾರರು ನೀಡಿದ ಹಿಂಬರಹ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ33 ಎಂದು, ಋಣಭಾರ ಪ್ರಮಾಣ ಪತ್ರದ ದೃಡೀಕೃತ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿಃ34 ಮತ್ತು 35 ಎಂದು, ಆಕಾರ್ ಬಂದ್ ಉತಾರದ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ36 ಎಂದು, ಸೆಟ್ಟಲ್ ಮೇಂಟ್ ರಿಜಿಸ್ಟರ್ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ37 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯಾವಕಾಶ ಕೇಳಿದ್ದರಿಂದ ಸಮಯಾವಕಾಶ ನೀಡಲಾಯಿತು.)**

ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.

ಓ.ಹೇ.ಕೆ. ಸರಿ ಇದೆ.

**ಸಿವಿಲ್ ಮತ್ತು ಜೆ.ಎಮ್.ಎಫ್.ಸಿ.**
**ನ್ಯಾಯಾಧೀಶರು, ಸಿರುಗುಪ್ಪ**